ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ,
ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-**560023**
ದೂ ಸಂಖ್ಯೆ: : 08022373587,
e-mail: mdnrhmkar@gmail.com

ಕರ್ನಾಟಕ ಸರ್ಕಾರ

ಸಂಖ್ಯೆ: NHM/CPHC-UHC/Circular/09/2020-21 ದಿನಾಂಕ:26/04/2021

# ಸುತ್ತೋಲೆ

**ವಿಷಯ :** ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಂ.ಎಲ್.ಹೆಚ್.ಪಿ ಗಳನ್ನು ಬೇರೆ ತಾಲ್ಲೂಕು ಅಥವಾ ಜಿಲ್ಲಾ ಕೇಂದ್ರಗಳಿಗೆ ನಿಯೋಜಿಸದಿರುವ ಕುರಿತು.

**ಉಲ್ಲೇಖ :** ಆಯುಕ್ತರು, ಆರೋಗ್ಯ ಮತ್ತು ಕು.ಕ ಸೇವೆಗಳು ಇವರ ಪತ್ರ ಸಂಖ್ಯೆ: NHM/CPHC-UHC/VC Review/17/2019-20 ದಿನಾಂಕ: 23/12/2020 ರನ್ವಯ

**********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಂ.ಎಲ್.ಹೆಚ್.ಪಿ ಗಳು ಪ್ರಾಥಮಿಕ ಹಂತದಲ್ಲಿ ಕೋವಿಡ್-19 ತಡೆಗಟ್ಟುವ ಹಾಗೂ ಅಪಾಯವಿರುವಂತಹ ವಯೋಮಾನದ ಗುಂಪಿನವರಿಗೆ ಮತ್ತು ಕೋಮಾರ್ಬಿಡ್ ಇರುವಂತಹ ಅಸಾಂಕ್ರಾಮಿಕ ರೋಗಗಳ ತಪಾಸಣೆ, Tele consultation ಸೇವೆ, ಲಸೀಕರಣ ಹಾಗೂ ಇತರೆ ಸಮಗ್ರ ಆರೋಗ್ಯ ಸೇವೆಗಳನ್ನು ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಬಲವರ್ಧನೆಗೊಳಿಸುವ ಅವಶ್ಯಕತೆ ಇರುತ್ತದೆ.

ತತ್ಸಂಬಂಧ ಕೋವಿಡ್-19 ನ ತುರ್ತು ಸಂದರ್ಭಗಳಲ್ಲಿ (ಕೋವಿಡ್-19 ಗೆ ಸಂಬಂಧಪಟ್ಟು ಕೆಲಸ) ಎಂ.ಎಲ್.ಹೆಚ್.ಪಿ ಗಳನ್ನು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳ ವ್ಯಾಪ್ತಿಯಲ್ಲಿ ಇವರನ್ನು ನಿಯೋಜಿಸಲು ತಿಳಿಸಿದೆ.

ಅರುಂಧತಿ
ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ

ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ:

1. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
2. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿಗಳು /ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು/ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳು/DPM/DAM ಚಿಕ್ಕಮಗಳೂರು ಜಿಲ್ಲೆ.
3. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕ್ಷೇಮ ಸಂಯೋಜಕರು.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕು.ಕ ಇಲಾಖೆ, ವಿಕಾಸಸೌಧ ಬೆಂಗಳೂರು.
2. ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ಯೋಜನಾ ನಿರ್ದೇಶಕರು, ಆರ್.ಸಿ.ಹೆಚ್ ಬೆಂಗಳೂರು.